ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	07(19).
ಸದಸ್ಯರ ಹೆಸರು	:	ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	29-01-2021.
ಉತ್ತರಿಸುವ ಸಚಿವರು	:	ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ.	ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಬಹುದು ಮತ್ತು ಯೋಜನೆಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳೇನು; ಈ ಯೋಜನೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಮಾಡಬಹುದು; (ಸದರಿ ಯೋಜನೆಗಳಲ್ಲಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಇರುವ ಸರ್ಕಾರಿ ಸುತ್ತೋಲೆ/ಆದೇಶಗಳನ್ನು ಪ್ರತಿಗಳನ್ನು ನೀಡುವುದು)	ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ಅಧಿಸೂಚಿತವಲ್ಲದ ಹಲವಾರು ಕೊಳಗೇರಿ ಪ್ರದೇಶಗಳನ್ನು ಅಭಿವೃದ್ಧಿ ಪಡಿಸುವ ಉದ್ದೇಶಕ್ಕಾಗಿ, 2020-21ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ರೂ.50.00 ಕೋಟಿಗಳ ಅನುದಾನವನ್ನು ಮೀಸಲಿಡಲಾಗಿದೆ ಸದರಿ ಯೋಜನೆಯಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು. 1. ರಸ್ತೆ ಮತ್ತು ಚರಂಡಿ/ಒಳ ಚರಂಡಿ ನಿರ್ವಹಣೆ. 2.ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು. 3.ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು. 4.ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆ ಸ್ಥಳೀಯ ಸಂಸ್ಥೆಗಳ ಸುಪರ್ದಿಗೆ ನೀಡುವುದು.)
ಆ.	ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಯಾವ ಯೋಜನೆಗಳನ್ನು ರೂಪಿಸಲಾಗಿದೆ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು.)	ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಇಲಾಖೆ ವತಿಯಿಂದ ಅಲ್ಪಸಂಖ್ಯಾತರು ವಾಸಿಸುವ ಪ್ರದೇಶಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಯಾವ ಯೋಜನೆಯು ಜಾರಿಯಲ್ಲಿರುವುದಿಲ್ಲ.
ಇ	ಅಲ್ಪಸಂಖ್ಯಾತರ ಇಲಾಖೆಯಿಂದ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಅಲ್ಪಸಂಖ್ಯಾತರ ಜನರು ವಾಸಿಸುವ ಪ್ರದೇಶದಲ್ಲಿ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು.)	ಕಳೆದ ಮೂರು ವರ್ಷಗಳಿಂದ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಮಾನ್ಯ ಮುಖ್ಯ ಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಅಲ್ಪಸಂಖ್ಯಾತರು ಜನರು ವಾಸಿಸುವ ಪ್ರದೇಶಗಳಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ. 1. ರಸ್ತೆ ಮತ್ತು ಚರಂಡಿ/ಒಳ ಚರಂಡಿ ನಿರ್ವಹಣೆ. 2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು. 3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು. 4.ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆ ಸ್ಥಳೀಯ ಸಂಸ್ಥೆಗಳ ಸುಪರ್ದಿಗೆ ನೀಡುವುದು.)

ಸಂಖ್ಯೆ: MWD 02 LMQ 2021

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು